**All India Radio: Bangalore**
**National Bulletins In Kannada**
**04.08.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**04.08.2025 / 19.35 hrs**

**<><*<><>*><>**

**ಮುಖ್ಯಾಂಶಗಳು**

**೧. ಸಂಸತ್ತಿನಲ್ಲಿ ಮುಂದುವರಿದ ವಿಪಕ್ಷಗಳ ಗದ್ದಲ; ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ**

**೨. ಜಾರ್ಖಂಡ್ ಮಾಜಿ ಮುಖ್ಯಮಂತ್ರಿ ಶಿಬು ಸೊರೆನ್ ನಿಧನ; ರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರ ಸಂತಾಪ**

**೩. ಐದು ದಿನಗಳ ಅಧಿಕೃತ ಭಾರತ ಭೇಟಿಗಾಗಿ ದೆಹಲಿಗೆ ಆಗಮಿಸಿದ ಫಿಲಿಪೈನ್ಸ್ ಅಧ್ಯಕ್ಷ**

**೪. ಆಂಡರ್ಸನ್-ತೆಂಡೂಲ್ಕರ್ ಟ್ರೋಫಿ - ಟೆಸ್ಟ್ ಸರಣಿಯ ಐದನೇ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಭಾರತಕ್ಕೆ ರೋಚಕ ಗೆಲುವು; ಸರಣಿ ಸಮಬಲ**

**<><*<><>*><>**

ಸಂಸತ್‌ನ ಉಭಯ ಸದನಗಳನ್ನು ನಾಳೆಗೆ ಮುಂದೂಡಲಾಗಿದೆ. ನವದೆಹಲಿಯಲ್ಲಿಂದು ನಿಧನರಾದ ಜಾರ್ಖಂಡ್ ಮುಕ್ತಿ ಮೋರ್ಚಾ ಹಿರಿಯ ನಾಯಕ ಮತ್ತು ಹಾಲಿ ಸಂಸದ ಶಿಬು ಸೊರೇನ್ ಅವರಿಗೆ ಗೌರವ ಸಲ್ಲಿಸಿದ ನಂತರ ರಾಜ್ಯಸಭೆಯನ್ನು ದಿನದ ಮಟ್ಟಿಗೆ ಮುಂದೂಡಲಾಯಿತು. ಆದರೆ, ಬಿಹಾರದಲ್ಲಿ ನಡೆಸಲಾದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ವಿರುದ್ಧ ಪ್ರತಿಪಕ್ಷಗಳ ಪ್ರತಿಭಟನೆಯಿಂದ ಲೋಕಸಭೆಯ ಕಲಾಪ ಸುಗಮವಾಗಿ ನಡೆಯಲು ಸಾಧ್ಯವಾಗಲಿಲ್ಲ. ಮೊದಲ ಮುಂದೂಡಿಕೆಯ ನಂತರ ಮಧ್ಯಾಹ್ನ ೨ ಗಂಟೆಗೆ ಲೋಕಸಭೆಯಲ್ಲಿ ಸದನ ಸೇರಿದಾಗ, ಬಿಹಾರದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ಚರ್ಚಿಸಬೇಕೆಂಬ ತಮ್ಮ ಬೇಡಿಕೆಯನ್ನು ಬೆಂಬಲಿಸಿ ವಿಪಕ್ಷಗಳ ಸದಸ್ಯರು, ಸದನದ ಬಾವಿಗಿಳಿದು ಘೋಷಣೆಗಳನ್ನು ಕೂಗಿದರು. ಈ ವೇಳೆ, ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ರಾಷ್ಟ್ರೀಯ ಕ್ರೀಡಾ ಆಡಳಿತ ವಿಧೇಯಕ-೨೦೨೫ ಮತ್ತು ರಾಷ್ಟ್ರೀಯ ಡೋಪಿಂಗ್ ವಿರೋಧಿ ತಿದ್ದುಪಡಿ ವಿಧೇಯಕ -೨೦೧೫ ರ ಬಗ್ಗೆ ಚರ್ಚೆ ನಡೆಸಲು, ವ್ಯವಹಾರ ಸಲಹಾ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ. ಈ ವಿಧೇಯಕಗಳು, ಕ್ರೀಡಾ ವಲಯ ಮತ್ತು ಕ್ರೀಡಾಪಟುಗಳಿಗೆ ಮುಖ್ಯ ಎಂದು ಹೇಳಿದರು. ವಿರೋಧ ಪಕ್ಷಗಳು, ಸದನದಲ್ಲಿ ಗದ್ದಲ ಸೃಷ್ಟಿಸುವುದು ಮತ್ತು ಕಲಾಪಕ್ಕೆ ಅಡ್ಡಿಪಡಿಸುವುದು ಸೂಕ್ತವಲ್ಲ ಎಂದರು. ಕೇಂದ್ರ ಯುವಜನ ಮತ್ತು ಕ್ರೀಡಾ ಸಚಿವ ಮನ್ಸೂಖ್ ಮಾಂಡವೀಯ ಮಾತನಾಡಿ, ರಾಷ್ಟ್ರೀಯ ಕ್ರೀಡಾ ಆಡಳಿತ ವಿಧೇಯಕ-೨೦೨೫ ಬಹಳ ಮುಖ್ಯ. ಉತ್ತಮ ಆಡಳಿತವನ್ನು ರಚಿಸುವ ಮೂಲಕ ಕ್ರೀಡಾ ಒಕ್ಕೂಟದ ಪರಿಸರ ವ್ಯವಸ್ಥೆಯು ಸುಧಾರಿಸುತ್ತದೆ ಹಾಗೂ ಬಲಗೊಳ್ಳುತ್ತದೆ. ಚರ್ಚೆ ಮತ್ತು ಅಂಗೀಕಾರಕ್ಕಾಗಿ ಇದನ್ನು ಪರಿಗಣಿಸುವಂತೆ ಸದನವನ್ನು ಒತ್ತಾಯಿಸಿದರು. ತಿಭಟನಾನಿರತ ಸದಸ್ಯರು, ತಮ್ಮ ಸ್ಥಾನಗಳಿಗೆ ಹಿಂತಿರುಗಿ ಈ ವಿಧೇಯಕಗಳನ್ನು ಚರ್ಚಿಸಲು ಅವಕಾಶ ನೀಡುವಂತೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಮನವಿ ಮಾಡಿದರು. ಆದರೂ, ವಿಪಕ್ಷಗಳ ಪ್ರತಿಭಟನೆ ಮುಂದುವರೆದ ಕಾರಣ ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು. ಇನ್ನೊಂದೆಡೆ, ರಾಜ್ಯಸಭೆಯಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಅಗಲಿದ ಜಾರ್ಖಂಡ್ ಮಾಜಿ ಮುಖ್ಯಮಂತ್ರಿ ಶಿಬು ಸೊರೆನ್ ಅವರಿಗೆ ಸದಸ್ಯರು ಗೌರವ ಸಲ್ಲಿಸಿದರು. ಈ ವೇಳೆ ಮಾತನಾಡಿದ ರಾಜ್ಯಸಭೆಯ ಉಪಸಭಾಪತಿ ಹರಿವಂಶ್, ಶಿಬು ಸೊರೆನ್ ಅವರು ಹಿರಿಯ ಮತ್ತು ವಿಶಿಷ್ಟ ಬುಡಕಟ್ಟು ನಾಯಕರಾಗಿದ್ದು, ಬುಡಕಟ್ಟು ಸಮುದಾಯಗಳ ಹಕ್ಕುಗಳು ಮತ್ತು ಉನ್ನತಿಗಾಗಿ ನಡೆದ ಅನೇಕ ಚಳವಳಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಅವರು ತಮ್ಮ ಜೀವನದುದ್ದಕ್ಕು ದೀನ ದಲಿತ ಹಕ್ಕುಗಳು ಮತ್ತು ಕಲ್ಯಾಣಕ್ಕಾಗಿ ಕೆಲಸ ಮಾಡಿದ್ದಾರೆ ಎಂದು ಹೇಳಿದರು. ನಂತರ, ಅಗಲಿದ ನಾಯಕನ ಗೌರವಾರ್ಥ

ಸದನದಲ್ಲಿ ಸಲ್ಪ ಸಮಯ ಮೌನ ಆಚರಿಸಲಾಯಿತು. ಬಳಿಕ, ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

**<><*<><>*><>**

ಜಾರ್ಖಂಡ್ ಮಾಜಿ ಮುಖ್ಯಮಂತ್ರಿ ಹಾಗೂ ಬುಡಕಟ್ಟು ಸಮುದಾಯಗಳ ನಾಯಕ ಶಿಬು ಸೊರೆನ್ ಇಂದು ನಿಧರಾಗಿದ್ದಾರೆ. ಅವರಿಗೆ ೮೧ ವರ್ಷ ವಯಸ್ಸಾಗಿತ್ತು. ಅನಾರೋಗ್ಯ ಹಿನ್ನಲೆ ಹಲವು ದಿನಗಳಿಂದ ದೆಹಲಿಯ ಗಂಗಾರಾಮ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಚಿಕಿತ್ಸೆ ಫಲಿಸದೇ ಇಂದು ಬೆಳಗ್ಗೆ ವಿಧಿವಶರಾಗಿದ್ದಾರೆ. ಶಿಬು ಸೊರೇನ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ರಾಜಕೀಯ ನಾಯಕರು ಸಂತಾಪ ಸೂಚಿಸಿದ್ದಾರೆ. ರಾಷ್ಟ್ರಪತಿ ಹಾಗೂ ಪ್ರಧಾನಿ ಅವರು, ನವದೆಹಲಿಯ ಆಸ್ಪತ್ರೆಯಲ್ಲಿ ಅವರ ಅಂತಿಮ ದರ್ಶನ ಪಡೆದರು. ಶಿಬು ಸೊರೇನ್ ಅವರು ಮೂರು ಬಾರಿ ಜಾರ್ಖಂಡ್ ಮುಖ್ಯಮಂತ್ರಿಯಾಗಿ, ಕೇಂದ್ರ ಸಚಿವರಾಗಿ ಹಾಗೂ ಲೋಕಸಭಾ ಹಾಗೂ ರಾಜ್ಯಸಭಾ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದರು. ಜಾರ್ಖಂಡ್ ಮುಕ್ತಿ ಮೋರ್ಚಾದ ಸಂಸ್ಥಾಪಕರಾಗಿದ್ದ ಅವರು, ಜಾರ್ಖಂಡ್ ಪ್ರತ್ಯೇಕ ರಾಜ್ಯಕ್ಕಾಗಿ ಹೋರಾಟ ನಡೆಸಿದ್ದರು.

**<><*<><>*><>**

೨೦೨೦ ರ ಗಾಲ್ವಾನ್ ಕಣಿವೆಯಲ್ಲಿ ಚೀನಾದೊಂದಿಗೆ ನಡೆದ ಘರ್ಷಣೆ ಸಂದರ್ಭದಲ್ಲಿ ಭಾರತೀಯ ಸೇನೆಯ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಕ್ಕಾಗಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಸುಪ್ರೀಂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ. ನ್ಯಾಯಮೂರ್ತಿಗಳಾದ ದೀಪಂಕರ್ ದತ್ತಾ ಮತ್ತು ಎ.ಜಿ.ಮಸಿಹ್ ಅವರಿದ್ದ ನ್ಯಾಯಪೀಠ, ವಿರೋಧ ಪಕ್ಷದ ನಾಯಕರಾಗಿ ರಾಹುಲ್ ಗಾಂಧಿ ಅವರು ಸಾಮಾಜಿಕ ಮಾಧ್ಯಮದಲ್ಲಿ ಅಲ್ಲ, ಬದಲಾಗಿ ಸಂಸತ್ತಿನಲ್ಲಿ ಇಂತಹ ವಿಷಯಗಳ ಬಗ್ಗೆ ಧ್ವನಿ ಎತ್ತಬೇಕು ಎಂದು ಹೇಳಿದೆ. ಎರಡು ಸಾವಿರ ಚದರ ಕಿಲೋ ಮೀಟರ್ ಭಾರತೀಯ ಭೂಪ್ರದೇಶವನ್ನು ಚೀನಾ ಆಕ್ರಮಿಸಿಕೊಂಡಿದೆ ಎಂಬ ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ನ್ಯಾಯಪೀಠ ಪ್ರಶ್ನಿಸಿತು. ಭಾರತೀಯ ಸೇನೆಯ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಸಂಬಂಧ ರಾಹುಲ್ ಗಾಂಧಿ ವಿರುದ್ಧ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಗೆ ತಡೆ ನೀಡಿದ್ದರೂ, ಅಲಹಬಾದ್ ಹೈಕೋರ್ಟ್ ವಿಚಾರಣೆಯನ್ನು ರದ್ದುಗೊಳಿಸಲು ನಿರಾಕರಿಸಿದ್ದ ವಿರುದ್ಧ ರಾಹುಲ್ ಗಾಂಧಿ ಮನವಿ ಕುರಿತು ನ್ಯಾಯಾಲಯ ಅವರಿಗೆ ನೋಟಿಸ್ ನೀಡಿದೆ. ಇನ್ನೊಂದೆಡೆ, ಈ ವಿಷಯದ ಕುರಿತು ಪ್ರತಿಕ್ರಿಯೆ ನೀಡಿರುವ ಬಿಜೆಪಿ ವಕ್ತಾರ ಗೌರವ್ ಭಾಟಿಯಾ, ರಾಹುಲ್ ಗಾಂಧಿಯವರ ಹೇಳಿಕೆ ದುರದೃಷ್ಟಕರ. ಲೋಕಸಭೆಯಲ್ಲಿ ವಿರೋಧಪಕ್ಷದ ನಾಯಕನಾಗಿರುವ ರಾಹುಲ್ ಗಾಂಧಿ ಅವರು ತಮ್ಮ ಬೇಜಾಜವಾಬ್ದಾರಿಯುತ ಹೇಳಿಕೆಯ ಮೂಲಕ ಧೈರ್ಯಶಾಲಿ ಭಾರತೀಯ ಪಡೆಗಳ ಸ್ಥೈರ್ಯ ಕುಗ್ಗಿಸುವ ಕೆಲಸ ಮಾಡಿದ್ದಾರೆ ಎಂದು ದೂರಿದ್ದಾರೆ.

**<><*<><>*><>**

ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ರೊಮುವಾಲ್ಡೆಜ್ ಮಾರ್ಕೋಸ್ ಜೂನಿಯರ್, ಭಾರತಕ್ಕೆ ಐದು ದಿನಗಳ ಅಧಿಕೃತ ಭೇಟಿಗಾಗಿ ಇಂದು ದೆಹಲಿಗೆ ಆಗಮಿಸಿದರು. ಈ ವೇಳೆ ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಪಬಿತ್ರಾ ಮಾರ್ಗರಿಟಾ, ಮಾರ್ಕೋಸ್ ಅವರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಫಿಲಿಪೈನ್ಸ್ ಅಧ್ಯಕ್ಷರ ಭೇಟಿ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತ ಮತ್ತು ಫಿಲಿಪೈನ್ಸ್ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೫ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿರುವಾಗ, ಫಿಲಿಪೈನ್ಸ್ ಅಧ್ಯಕ್ಷರ ಈ ಭೇಟಿಯು, ಎರಡೂ ರಾಷ್ಟ್ರಗಳ ನಡುವಿನ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಕಾರಣವಾಗುತ್ತದೆ ಎಂದು ಹೇಳಿದ್ದಾರೆ. ಭೇಟಿಯ ಸಂದರ್ಭದಲ್ಲಿ ಫಿಲಿಪೈನ್ಸ್ ಅಧ್ಯಕ್ಷರು, ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಹಾಗೂ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಅವರನ್ನು ಭೇಟಿಯಾಗಲಿದ್ದು, ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಭಾರತ ಮತ್ತು ಫಿಲಿಪೈನ್ಸ್ ನಡುವಿನ ರಾಜತಾಂತ್ರಿಕ ಸಂಬಂಧಗಳು ೧೯೪೯ರ ನವೆಂಬರ್‌ನಲ್ಲಿ ಸ್ಥಾಪನೆಯಾಯಿತು. ಅಂದಿನಿಂದ ಉಭಯ ದೇಶಗಳು ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ ಮತ್ತು ಭದ್ರತೆ, ಕಡಲ

ಸಹಕಾರ, ಕೃಷಿ, ಆರೋಗ್ಯ ರಕ್ಷಣೆ, ಔಷಧಗಳು, ಡಿಜಿಟಲ್ ತಂತ್ರಜ್ಞಾನ ಸೇರಿದಂತೆ ವ್ಯಾಪಕ ಶ್ರೇಣಿಯ ಕ್ಷೇತ್ರಗಳಲ್ಲಿ ಬಲವಾದ ಪಾಲುದಾರಿಕೆ ಹೊಂದಿವೆ.

**<><*<><>*><>**

ಲಂಡನ್‌ನ ಓವಲ್ ಕ್ರೀಡಾಂಗಣದಲ್ಲಿ ನಡೆದ ಆಂಡರ್ಸನ್-ತೆಂಡೂಲ್ಕರ್ ಟೆಸ್ಟ್ ಸರಣಿಯ ಐದನೇ ಮತ್ತು ಕೊನೆಯ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಭಾರತ ಆರು ರನ್‌ಗಳ ರೋಚಕ ಜಯ ದಾಖಲಿಸಿದೆ. ಈ ಮೂಲಕ ಐದು ಟೆಸ್ಟ್‌ಗಳ ಸರಣಿಯಲ್ಲಿ ೨-೨ ಅಂತರದಿಂದ ಸರಣಿ ಸಮಗೊಂಡಿದೆ. ಐದನೇ ಟೆಸ್ಟ್ ಪಂದ್ಯದ ಎರಡನೇ ಇನ್ನಿಂಗ್ಸ್‌ನಲ್ಲಿ ಭಾರತದ ಪರ ವೇಗಿ ಮೊಹಮ್ಮದ್ ಸಿರಾಜ್ ೫ ವಿಕೆಟ್ ಹಾಗೂ ಕನ್ನಡಿಗ ಪ್ರಸಿದ್ಧ್ ಕೃಷ್ಣ ಅವರ ೪ ವಿಕೆಟ್‌ಗಳ ನೆರನಿಂದ ಭಾರತ ಪಂದ್ಯ ಗೆದ್ದಿದೆ. ಭಾರತ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೨೨೪ ಹಾಗೂ ಎರಡನೇ ಇನ್ನಿಂಗ್ಸ್‌ನಲ್ಲಿ ೩೯೬ ರನ್ ಗಳಿಸಿತು. ಇಂಗ್ಲೆಂಡ್ ತನ್ನ ಮೊದಲ ಇನ್ನಿಂಗ್ಸ್ ೨೪೭ ರನ್ ಹಾಗೂ ಎರಡನೇ ಇನ್ನಿಂಗ್ಸ್‌ನಲ್ಲಿ ೩೬೭ ರನ್ ಗಳಿಸಿತು. ಮೊಹಮ್ಮದ್ ಸಿರಾಜ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಇದೇ ವೇಳೆ ಶುಭ್‌ಮನ್ ಗಿಲ್ ಮತ್ತು ಹ್ಯಾರಿ ಬ್ರೂಕ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದಿದ್ದಾರೆ.

**<><*<><>*><>**

ಭಾರತ ಮತ್ತು ಅಮೆರಿಕ ನಡುವಿನ ಸುಂಕ ಸಂಬಂಧಿತ ಬೆಳವಣಿಗೆಗಳ ಕುರಿತು ಸುಳ್ಳು ಹೇಳಿಕೆಗಳನ್ನು ಹರಡುತ್ತಿರುವ ಸಾಮಾಜಿಕ ಮಾಧ್ಯಮ ಖಾತೆಗಳಿಂದ ಕೇಂದ್ರ ವಾರ್ತಾ ಶಾಖೆಯ ಸತ್ಯ ಶೋಧನಾ ಘಟಕ ವಿವರಣೆ ಕೇಳಿದೆ. ಈ ಖಾತೆಗಳು ವಿದೇಶಾಂಗ ಸಚಿವಾಲಯ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಗಳು ಎಂದು ಬಿಂಬಿಸುವ ಸುಳ್ಳು ಹೇಳಿಕೆಗಳನ್ನು ಹರಡುತ್ತಿದ್ದವು ಎಂಬ ಆರೋಪವಿದೆ. ಆನ್‌ಲೈನ್‌ನಲ್ಲಿ ಪ್ರಸಾರವಾಗುತ್ತಿರುವ ತಪ್ಪು ಮಾಹಿತಿ ಮತ್ತು ನಕಲಿ ಪ್ರಚಾರಕ್ಕೆ ಬಲಿಯಾಗದಂತೆ ಸತ್ಯಶೋಧನಾ ಘಟಕ ಬಳಕೆದಾರರಿಗೆ ಎಚ್ಚರಿಕೆ ನೀಡಿದೆ. ಅಂತಹ ಯಾವುದೇ ವಿಷಯವನ್ನು ಹಂಚಿಕೊಳ್ಳುವ ಅಥವಾ ನಂಬುವ ಮೊದಲು, ಅಧಿಕೃತ ಮೂಲಗಳೊಂದಿಗೆ ಪರಿಶೀಲಿಸುವಂತೆಯೂ ಜನರಿಗೆ ಸಲಹೆ ನೀಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**